ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಸಂಖ್ಯೆ	:	516
ಸದಸ್ಯರ ಹೆಸರು	:	ಶ್ರೀ.ಸಿ.ಎಂ.ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	16-12-2021.
ಉತ್ತರಿಸುವ ಸಚಿವರು	:	ಮಾನ್ಯ ಮುಖ್ಯಮಂತ್ರಿಗಳು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ರಾಜ್ಯದಲ್ಲಿ ಅಲ್ಪಸಂಖ್ಯಾತ ಹುದ್ದೆಗಳಿಗೆ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಸರ್ಕಾರವು ನೀಡುವ ಸೌಲಭ್ಯಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	**ಅಲ್ಪಸಂಖ್ಯಾತರ ನಿರ್ದೇಶನಾಲಯ** • ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಪೋಸ್ಟ್ ಡಾಕ್ಟರೇಟ್ ಕೋರ್ಸ್ ಮುಂತಾದವುಗಳನ್ನು ವಿದೇಶದ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಸಂಗ ಮಾಡಲು ವಿದ್ಯಾರ್ಥಿವೇತನ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. • ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ 6 ಲಕ್ಷಕ್ಕಿಂತ ಕಡಿಮೆ ಇರುವಂತಹ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ ಗರಿಷ್ಠ 20 ಲಕ್ಷ • 6 ಲಕ್ಷಕ್ಕಿಂತ 15 ಲಕ್ಷ ಇರುವ ವಾರ್ಷಿಕ ವರಮಾನದ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ 10 ಲಕ್ಷ ವಿದ್ಯಾರ್ಥಿವೇತನವನ್ನು ನೀಡಲಾಗುವುದು. ಈ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಯ 1 ಅಥವಾ 2 ವರ್ಷಗಳ ಅವಧಿಗೆ ಮಾತ್ರ ನೀಡಲಾಗುವುದು. **ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ನೇರಸಾಲ ಯೋಜನೆ ಅಡಿಯಲ್ಲಿ ಮಾತ್ರ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಉನ್ನತ ಶಿಕ್ಷಣಕ್ಕಾಗಿ ಸಾಲ ಸೌಲಭ್ಯ ಕಲ್ಪಿಸಲಾಗುವುದು.
ಆ.	ಕಳೆದ 3 ವರ್ಷಗಳಲ್ಲಿ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಎಷ್ಟು ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಅರ್ಜಿ ಸಲ್ಲಿಕೆಯಾಗಿತ್ತು; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಸದರಿ ಸೌಲಭ್ಯದ ಫಲಾನುಭವಿಗಳಾಗಿದ್ದಾರೆ; (ವಾರ್ಷಿಕವಾರು, ಅಂಕಿ-ಅಂಶಗಳ ಸಂಪೂರ್ಣ ಮಾಹಿತಿ ನೀಡುವುದು)	**ಅಲ್ಪಸಂಖ್ಯಾತರ ನಿರ್ದೇಶನಾಲಯ** ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳಲ್ಲಿ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಮತ್ತು ಫಲಾನುಭವಿಗಳ ವಿವರ ಕೆಳಕಂಡಂತಿದೆ.

ಕ್ರ.ಸಂ	ವರ್ಷ	ಸ್ವೀಕೃತವಾದ ಅರ್ಜಿಗಳ ಸಂಖ್ಯೆ		ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ	
		ಹೊಸ	ನವೀಕರಣ	ಹೊಸ	ನವೀಕರಣ
1	2018-19	513	182	267	175
2	2019-20	415	235	247	234
3	2020-21	0	215	0	193

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ

ಕ್ರ.ಸಂ	ವರ್ಷ	ಒಟ್ಟು ಸಲ್ಲಿಕೆಯಾದ ಅರ್ಜಿಗಳು	ಒಟ್ಟು ಸೌಲಭ್ಯ ಪಡೆದ ವಿದ್ಯಾರ್ಥಿಗಳು
1	2018-19	15	15
2	2019-20	15	15
3	2020-21	22	14

ಇ.	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು (ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ, ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳು ಅಂಕಿ-ಅಂಶಗಳ ತಾಲ್ಲೂಕುವಾರು ಮಾಹಿತಿ ನೀಡುವುದು); ಈ ರೀತಿಯ ವಸತಿ ನಿಲಯಗಳಲ್ಲಿ ಸ್ವಚ್ಛತೆ ಮತ್ತು ಮೇಲ್ವಿಚಾರಣೆಗಳ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು?	**ಅಲ್ಪಸಂಖ್ಯಾತರ ನಿರ್ದೇಶನಾಲಯ** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 304 ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿದೆ. ಮೆಟ್ರಿಕ್ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದೆ. ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ, ಬಾಲಕ ಮತ್ತು ಬಾಲಕಿಯರ ವಸತಿನಿಲಯಗಳು ಅಂಕಿ-ಅಂಶಗಳ ತಾಲ್ಲೂಕುವಾರು ಮಾಹಿತಿಯ ವಿವರ **"ಅನುಭಂದ-01"** ರಲ್ಲಿ ನೀಡಲಾಗಿದೆ. ವಸತಿ ನಿಲಯಗಳ ಮೇಲ್ವಿಚಾರಣೆ, ನಿರ್ವಹಣೆ, ಸ್ವಚ್ಛತೆಗಾಗಿ ನಿಲಯಪಾಲಕರೊಂದಿಗೆ ಸ್ವಚ್ಛತಾ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ. • ಕಾಲ ಕಾಲಕ್ಕೆ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ವಸತಿನಿಲಯಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ ನಡೆಸುತ್ತಾರೆ. • ಪ್ರಸ್ತುತ ಕೋವಿಡ್-19ನ ಸಾಂಕ್ರಾಮಿಕ ರೋಗದ ಕಾರಣ ಸ್ವಚ್ಛತೆಯ ಬಗ್ಗೆ ತೀವ್ರವಾದ ನಿಗಾ ವಹಿಸಲಾಗುತ್ತಿದೆ. • SOP ನಿಯಮಾವಳಿಯ ಪ್ರಕಾರ ವಸತಿ ನಿಲಯಗಳಲ್ಲಿ ಸ್ವಚ್ಛತೆಗೆ ಆಧ್ಯತೆಯನ್ನು ನೀಡಿ, ಸ್ವಚ್ಛತೆಯಿಂದ ವಸತಿ ನಿಲಯಗಳನ್ನು ಶುಚಿಯಾಗಿ ಇಟ್ಟು ಕೊಳ್ಳಲು ಕ್ರಮವಹಿಸಲಾಗಿದೆ. • ವಿದ್ಯಾರ್ಥಿನಿಲಯಗಳನ್ನು ಕಾಲ-ಕಾಲಕ್ಕೆ ಸ್ಯಾನಿಟೈಜೇಷನ್ ಮಾಡಲಾಗುತ್ತಿದ್ದು, ಕೋವಿಡ್-19 ಸಾಂಕ್ರಾಮಿಕ ರೋಗವನ್ನು ಎದುರಿಸಲು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ ಹಾಗೂ ಕಾಲ-ಕಾಲಕ್ಕೆ ಕೋವಿಡ್ ಟೆಸ್ಟ್ ಮಾಡಿಸಲಾಗುತ್ತಿದೆ. • ದಿನಕ್ಕೆ ಎರಡು ಬಾರಿ ವಿದ್ಯಾರ್ಥಿಗಳ ದೇಹದ ಉಷ್ಣಾಂಶದ ತಪಾಸಣೆ ಮಾಡಿ, ವಹಿಯಲ್ಲಿ ದಾಖಲಿಸಲಾಗುತ್ತಿದೆ. ಒಂದು ವೇಳೆ ಉಷ್ಣಾಂಶವು ಹೆಚ್ಚಾಗಿದ್ದಲ್ಲಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಂಪರ್ಕಿಸಿ, ವೈದ್ಯಕೀಯ ಚಿಕಿತ್ಸೆಯನ್ನು ನೀಡುವ ವ್ಯವಸ್ಥೆಯನ್ನು ಮಾಡಲಾಗಿದೆ. • 2021-22ನೇ ಶೈಕ್ಷಣಿಕ ವರ್ಷದಲ್ಲಿ ಎಲ್ಲಾ ವಸತಿ ನಿಲಯಗಳಲ್ಲಿ ಸ್ವಚ್ಛತಾ ಸಪ್ತಾಹ ನಿರ್ವಹಿಸಲಾಗಿದೆ.

ಸಂಖ್ಯೆ: **MWD 286 LMQ 2021**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ